**ಕರ್ನಾಟಕ ಸರ್ಕಾರ**

ನಂ.ಗ್ರಾಅಪ/403/ಗ್ರಾಪಂಅ/2011

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 09-03-2012

ಇಂದ,

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

ಇವರಿಗೆ,

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯಿತಿಗಳು.

ಮಾನ್ಯರೇ,

ವಿಷಯ: ಗ್ರಾಮ ಪಂಚಾಯಿತಿಗಳಿಂದ ಸರ್ಕಾರಕ್ಕೆ ಜಮೆಯಾಗಲು ಬಾಕಿಯಿರುವ ರಾಜಧನ, ಮಾರಾಟ ತೆರಿಗೆ, ಆದಾಯ ತೆರಿಗೆ, ಉಪಕರ, ಮತ್ತು ಕಾರ್ಮಿಕ ಕಲ್ಯಾಣ ನಿಧಿಗಳನ್ನು ಜಮಾ ಮಾಡುವ ಬಗ್ಗೆ.

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ರಾಜಧನ, ಮಾರಾಟ ತೆರಿಗೆ, ಆದಾಯ ತೆರಿಗೆ, ಉಪಕರ, ಮತ್ತು ಕಾರ್ಮಿಕ ಕಲ್ಯಾಣ ನಿಧಿಗಳ ಮೊತ್ತವನ್ನು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು/ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಕಟಾಯಿಸದೇ ಇರುವುದು, ಕಟಾಯಿಸಿದ್ದರೆ ಸಂಬಂಧಪಟ್ಟ ಸರ್ಕಾರದ ಲೆಕ್ಕ ಶೀರ್ಷಿಕೆಗೆ ಜಮಾ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಸರ್ಕಾರವು ಈ ವಿಷಯವನ್ನು ತೀವ್ರತರವಾಗಿ ಪರಿಗಣಿಸಿದ್ದು, ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು/ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ರಾಜಧನ, ಮಾರಾಟ ತೆರಿಗೆ, ಆದಾಯ ತೆರಿಗೆ, ಉಪಕರ, ಮತ್ತು ಕಾರ್ಮಿಕ ಕಲ್ಯಾಣ ನಿಧಿಗಳ ಮೊತ್ತವನ್ನು ಕಟಾಯಿಸಿ ಸಂಬಂಧಪಟ್ಟ ಲೆಕ್ಕ ಶೀರ್ಷಿಕೆ ಜಮಾ ಮಾಡಲು ಕ್ರಮ ವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ಹೆಚ್.ಬಿ. ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ